843 ಶ್ರೀ ಖಾದರ್ ಯು.ಟಿ. : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ಈ ವರ್ಷ ವೃತ್ತಿಪರ ಕೋರ್ಸಿನ ಸಿ.ಇ.ಟಿ. (C.E.T) ಕೇಂದ್ರವನ್ನು ಸ್ಥಾಪಿಸಲು ಸರ್ಕಾರ ಉದ್ದೇಶಿಸಿದೆಯೇ;

ಆ) ಸಿ.ಇ.ಟಿ. (C.E.T) ಕೇಂದ್ರವನ್ನು ಮಂಗಳೂರಿನಲ್ಲಿ ಪ್ರಾರಂಭಿಸುವುದರಿಂದ ಈ ವಿದ್ಯಾರ್ಥಿಗಳಿಗೆ ಅನುಕೂಲವಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಸಿ.ಇ.ಟಿ. (C.E.T) ಕೇಂದ್ರ ತೆರೆಯಲು ಯಾವ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು) :

ಅ) ಹೌದು. ಆನ್‌ಲೈನ್ ಸೀಟು ಹಂಚಿಕೆ ಕೇಂದ್ರ ಸ್ಥಾಪಿಸಲಾಗುತ್ತದೆ.

ಆ) ಹೌದು

ಇ) ಮಂಗಳೂರಿನಲ್ಲಿ ಸಿಇಟಿ 2010ರ ಆನ್‌ಲೈನ್ ಸೀಟು ಹಂಚಿಕೆ ಕೇಂದ್ರ ಸ್ಥಾಪಿಸುವ ಬಗ್ಗೆ ಕಟ್ಟಡದ ಆಯ್ಕೆಗೆ ಪರಿಶೀಲನೆ ನಡೆಸಿದ್ದು, ಈ ಬಗ್ಗೆ ಅಂತಿಮ ತೀರ್ಮಾನ ತೆಗೆದುಕೊಳ್ಳಲಾಗುವುದು.

842 ಶ್ರೀ ಅಭಯಚಂದ್ರ ಜೈನ್ ಕೆ. (ಮೂಡಬಿದ್ರೆ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೊಲ್ಕಿ–ಮೂಡುಬಿದ್ರೆ ವಿಧಾನಸಭಾ ಕ್ಷೇತ್ರದಲ್ಲಿ ಸರ್ಕಾರ ಹೊಸದಾಗಿ ಪ್ರಾರಂಭಿಸಿರುವ ಪ್ರೌಢಶಾಲೆಗಳಲ್ಲಿ ಇದುವರೆವಿಗೂ ಶಿಕ್ಷಕರು/ಶಿಕ್ಷಕೇತರರನ್ನು ನೇಮಕ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಇದರಿಂದ ಗ್ರಾಮೀಣ ಮಟ್ಟದ ವಿದ್ಯಾರ್ಥಿಗಳಿಗೆ ವ್ಯಾಸಂಗಕ್ಕೆ ತೊಂದರೆಯಾಗುತ್ತಿಲ್ಲವೇ;

ಇ) ಹಾಗಿದ್ದಲ್ಲಿ, ಈ ಹುದ್ದೆಗಳನ್ನು ತಕ್ಷಣ ಭರ್ತಿ ಮಾಡಲು ಸರ್ಕಾರವು ಕ್ರಮ ಕೈಗೊಳ್ಳಲಾಗುವುದೇ?